# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 07 :2020-21 ದಿನಾಂಕ: 16.01.2021

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.16.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದಾ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
2. ಶ್ರೀ.ಬಸವರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು, ದಾಸರಹಳ್ಳಿ ವಾರ್ಡ್ ನಂ.15
3. ಶ್ರೀ.ಮುನಿರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು, ದಾಸರಹಳ್ಳಿ ವಾರ್ಡ್ ನಂ.15
4. ಶ್ರೀ.ಚಂದ್ರಶೇಖರ್, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ
5. ಶ್ರೀ.ತಮ್ಮಣ್ಣ, ಅಧ್ಯಕ್ಷರು, ವಿನಾಯಕ ಕನ್ನಡ ಸಂಘ, ದಾಸರಹಳ್ಳಿ ವಾರ್ಡ್ ನಂ.15
6. ಶ್ರೀ.ಲಕ್ಕಪ್ಪ, ಕಾರ್ಯದರ್ಶಿಗಳು, ಒಕ್ಕಲಿಗ ಸಂಘ, ದಾಸರಹಳ್ಳಿ ವಾರ್ಡ್ ನಂ.15
7. ಶ್ರೀ.ಅಂಬರೀಶ್, ಸದಸ್ಯರು, ವಿನಾಯಕ ಕನ್ನಡ ಸಂಘ, ದಾಸರಹಳ್ಳಿ ವಾರ್ಡ್ ನಂ.15
8. ಶ್ರೀಮತಿ.ಅನುಸೂಯಮ್ಮ, ಉಪಾಧ್ಯಕ್ಷರು ಮಹಿಳಾ ಸಂಘ, ಟಿ.ದಾಸರಹಳ್ಳಿ
9. ಶ್ರೀ.ಶಿವಕುಮಾರ್, ವಿನಾಯಕ ಕನ್ನಡ ಸಂಘ ಸದಸ್ಯರು

ಶ್ರೀ.ಅಶೋಕ್ ಹಿಂದಾ, ನೋಡೆಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

**1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.**

ದಿ.02.01.2021 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಶ್ರೀ.ಮುನಿರಾಜು ರವರು ದಾಸರಹಳ್ಳಿ ವ್ಯಾಪ್ತಿಯಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಕೆ ಸಂಬಂಧಪಟ್ಟಂತೆ ಎಷ್ಟು ಸ್ಥಳಗಳಲ್ಲಿ ಅಳವಡಿಸಲಾಗುತ್ತಿದೆ ಎಂಬುದರ ಬಗ್ಗೆ ವಿವರನೆ ಕೇಳಲಾಗಿತ್ತು, ಅದರಂತೆ ಜನ ವಿವಿಧ ಪ್ರದೇಶದಲ್ಲಿನ 10 ಸ್ಥಳಗಳಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಕೆ ಮಾಡಲಾಗುತ್ತಿದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಪಾಸಿಟಿವ್ ಕೇಸ್ 1018, ಒಟ್ಟು ಬಿಡುಗಡೆ 1009, ಮರಣ ಹೊಂದಿದದವರು 02 ಹಾಗೂ ಒಟ್ಟು Active case ಪ್ರಕರಣಗಳು 07 Home Isolation ಪ್ರಕರಣಗಳು 02 & Hospitalization ಪ್ರಕರಣಗಳು 03 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಅದರಂತೆ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿದ್ದು, ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುತ್ತಿರುವವರಿಗೆ ಪೋಲೀಸ್ ಸಹಾಯದೊಂದಿಗೆ ಪ್ರತೀ ನಿತ್ಯ ಸುಮಾರು 30 ರಿಂದ 35 ಜನಗಳಿಗೆ ದಂಢವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ಮಾರ್ಷಲ್ ರವರು ವಿವರಿಸಿದರು.

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು. ವಾರ್ಡ್ ಸದಸ್ಯರುಗಳು ರಸ್ತೆಯ ಬದಿಯಲ್ಲಿ ಹಾಗೂ ಖಾಲಿ ನಿವೇಶಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳು ದೂರಿದರು ಸದರಿ ವಿಷಯದ ಬಗ್ಗೆ ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳು ಗೈರು ಹಾಜರಿದ್ದ ಕಾರಣ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ತುರ್ತಾಗಿ ಕ್ರಮವಹಿಸುವ ಬಗ್ಗೆ ನೋಡೆಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ತಿಳಿಸಿದರು.

**4.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

ದಾಸರಹಳ್ಳಿ ವಾರ್ಡ್ ನಂ.15ರಲ್ಲಿ 2019-20ನೇ ಸಾಲಿನ ಆಯವ್ಯಯದಲ್ಲಿ ವಾರ್ಷಿಕ ಕಾರ್ಯಕ್ರಮದ ಅನುದಾನದಲ್ಲಿ ದನಿನ ಮಾರಮ್ಮ ದೇವಸ್ಥಾನದ ಮುಂಬಾಗದಲ್ಲಿ ಪ್ಲಾಟ್‌ಫಾರಂ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಹಾಗೂ ಕಾಳಾಸ್ತಿನಗರದಲ್ಲಿ ನವನಗರೋತ್ಥಾನ ಯೋಜನೆ ಅಡಿಯ ಸಿಮೆಂಟ್ ಕಾಂಕ್ರೀಟ್ ರಸ್ತೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಎಂದು ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿದರು.

**5. ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.**

ದಾಸರಹಳ್ಳಿ ವಾರ್ಡ್ ವ್ಯಾಪ್ತಿಗೆ 2020-21ನೇ ಸಾಲಿನ ಆಯವ್ಯಯದಲ್ಲಿ ಕೊಳವೆ ಬಾವಿ ಕೊರೆಯಲು ರೂ.35.00 ಲಕ್ಷಗಳ ಅನುದಾನ ದೊರೆತಿದ್ದು, ಸದರಿ ಅನುದಾನದಲ್ಲಿ 03 ಕೊಳವೆ ಬಾವಿಗಳನ್ನು ಕೊರೆಯಲು ಅಂದಾಜಿನಲ್ಲಿ ಅಳವಡಿಸಿಕೊಂಡಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಅಭಾವ ಹೆಚ್ಚಿರುವ ಸ್ಥಳವನ್ನು ಗುರುತಿಸಿ ಮಾಹಿತಿ ನೀಡುವ ಸಂಬಂಧ ವಾರ್ಡ್ ಕಮಿಟಿ ಸದಸ್ಯರುಗಳಿಗೆ ವಾರ್ಡ್ ಅಭಿಯಂತರು ತಿಳಿಸಿದರು.

**6. ವಿದ್ಯುತ್ ಸರಬರಾಜು, ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.**

ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳು ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಬೀದಿದೀಪಗಳು ಕಾರ್ಯ ನಿರ್ವಹಿಸದಿರುವ ಬಗ್ಗೆ ಹಾಗೂ ಹೊಸದಾಗಿ ಬಲ್ಬ್‌ಗಳನ್ನು ಅಳವಡಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಸಂಬಂಧಪಟ್ಟ ಬಿಬಿಎಂಪಿ ವಿದ್ಯುತ್ ವಿಭಾಗದ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ಪರಿಶೀಲಿಸಿ, ತುರ್ತು ಕ್ರಮವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

**7. ಸರ್ಕಾರಿ ಸ್ವತ್ತಿಗೆ ಸಂಬಂಧಿಸಿದಂತೆ**

ದಾಸರಹಳ್ಳಿ ವಾರ್ಡ್‌ನ ಕಾಳಾಸ್ತ್ತಿನಗರದ ಸರ್ವೆ ನಂ.8, ಉರ್ದು ಶಾಲೆಯ ಪಕ್ಕದಲ್ಲಿನ ಜಾಗ ಗೋಮಾಳ ಜಾಗವಾಗಿದ್ದು, ಸದರಿ ಜಾಗವನ್ನು ಸಾರ್ವಜನಿಕರು ಕಬಳಿಕೆ ಮಾಡದಂತೆ ಸರ್ವೆ ಕಾರ್ಯ ನಡೆಸಿ ಸರ್ಕಾರಿ ಜಾಗದ ಹದ್ದುಬಸ್ತು ಅಳತೆ ಮಾಡಿ ಬಿಬಿಎಂಪಿ ವಶಕ್ಕೆ ತೆಗೆದುಕೊಳ್ಳಲು ವಾರ್ಡ್ ಸಮಿತಿ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

ಸದರಿ ಜಾಗಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಿ, ಸರ್ಕಾರಿ ಸ್ವತ್ತೋ ಅಥವಾ ಸಾರ್ವಜನಿಕ ಸ್ವತ್ತೋ ಎಂದು ಸರ್ವೆ ಕಾರ್ಯ ಮಾಡುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆಯಲು ನೋಡೆಲ್ ಅಧಿಕಾರಿ ರವರು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 15, ದಾಸರಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.